ಆ) ಕರಾವಳಿ ಜಿಲ್ಲೆಗಳಲ್ಲಿ ಪ್ರಮುಖವಾಗಿ ಬೆಳೆಯುತ್ತಿರುವ ಮುಖ್ಯ ಕೃಷಿ ಬೆಳೆಗಳಾದ ಭತ್ತ, ಎಣ್ಣೆಕಾಳು ಬೆಳೆಗಳಾದ ನೆಲಗಡಲೆ, ಎಳ್ಳು, ದ್ವಿದಳಧಾನ್ಯದ ಬೆಳೆಗಳಲ್ಲಿ ಉದ್ದು, ಹೆಸರು, ಆಲಸಂದೆ ಇವುಗಳ ಜೊತೆಗೆ ಮುಸುಕಿನಜೊಳ, ಕಬ್ಬು ಮತ್ತು ಹತ್ತಿ ಬೆಳೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಲು ಅವಕಾಶವಿರುತ್ತದೆ.

ಇ) ಕರಾವಳಿ ಜಿಲ್ಲೆಗಳಲ್ಲಿ ಸಾಂಪ್ರದಾಯಿಕವಾಗಿ ಬೆಳೆಯುತ್ತಿದ್ದ ಪ್ರಮುಖ ಕೃಷಿ ಬೆಳೆಗಳಾದ ಭತ್ತ, ನೆಲಗಡಲೆ, ಹೆಸರು, ಉದ್ದು, ಆಲಸಂದೆ, ಕಬ್ಬು, ಹತ್ತಿ ಇತ್ಯಾದಿ ಬೆಳೆಗಳ ವಿಸ್ತೀರ್ಣವು ಕಳೆದ 2–3 ವರ್ಷಗಳಲ್ಲಿ ರಾಜ್ಯ ಎದುರಿಸಿದ ಬರಗಾಲದ ಪ್ರಯುಕ್ತ ಸ್ವಲ್ಪ ಮಟ್ಟಿಗೆ ಕಡಿಮೆಯಾಗಿರುತ್ತದೆ. ಕರಾವಳಿ ಜಿಲ್ಲೆಗಳಲ್ಲಿ ಬೀಳುವ ಸಕಾಲಿಕ ಮಳೆ ಹಾಗೂ ಹಿಂಗಾರು/ಬೇಸಿಗೆ ಹಂಗಾಮುಗಳಲ್ಲಿ ನೀರಿನ ಲಭ್ಯತೆ ಮೇಲೆ ಜಿಲ್ಲೆಯಲ್ಲಿ ಬೆಳೆಯುವ ಕೃಷಿ ಬೆಳೆಗಳ ವಿಸ್ತೀರ್ಣವು ಏರಿಳಿತವಾಗುತ್ತದೆ.

ಈ) ಪ್ರಮುಖವಾಗಿ ಬೆಳೆಯುವ ಕೃಷಿ ಬೆಳೆಗಳ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವ ಸಲುವಾಗಿ ಮೇಲೆ (ಅ) ನಲ್ಲಿ ತಿಳಿಸಿರುವ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು. ಅವಶ್ಯಕತೆಸಿದಲ್ಲಿ ಮೇಲಿನ ಯೋಜನೆಗಳಿಗೆ ಹೆಚ್ಚಿನ ಅನುದಾನವನ್ನು ನೀಡುವುದರ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

1467(1765) ಶ್ರೀ ಪದ್ಮನಾಭ ಕೊಟ್ಟಾರಿ.ಕೆ ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ನೋಂದಾವಣೆಗೊಂಡ ವಿದ್ಯುಚ್ಛಕ್ತಿ ಸಹಕಾರ ಸಂಘಗಳು ಎಷ್ಟು;

ಆ) ಈ ಎಲ್ಲಾ ಸಹಕಾರ ಸಂಘಗಳು ಲಾಭದಲ್ಲಿ ನಡೆಯುತ್ತಿವೆಯೇ;

ಇ) ವಿದ್ಯುತ್ ಉತ್ಪಾದನೆಯ ಅಭಾವದ ದಿನಗಳಲ್ಲಿ ಸಹಕಾರ ತಳಹದಿಯ ವಿದ್ಯುತ್ ಉತ್ಪಾದನೆಗೆ ಪ್ರೋತ್ಸಾಹಿಸುವ ದಿಕ್ಕಿನಲ್ಲಿ ಸರ್ಕಾರದ ಕ್ರಮಗಳೇನು;

ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಷ್ಟು ಸಹಕಾರ ಸಂಘಗಳು ವಿದ್ಯುತ್ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಅರ್ಜಿ ಸಲ್ಲಿಸಿವೆ;

ಉ) ಅವುಗಳನ್ನು ಪೂರ್ಣ ಪ್ರಮಾಣದಲ್ಲಿ ಪುರಸ್ಕರಿಸುವ ಯೋಜನೆ ಸರ್ಕಾರದ ಮುಂದಿದೆಯೇ (ವಿವರಗಳನ್ನು ಒದಗಿಸುವುದು)?

ಶ್ರೀ ಆರ್.ವಿ.ದೇಶಪಾಂಡೆ (ಸಹಕಾರ ಸಚಿವರು):

ಅ) 04

ಆ) ಇಲ್ಲ.

ಇ) ಸಹಕಾರ ಸಂಘ ಅಥವಾ ವ್ಯಕ್ತಿಗಳನ್ನೊಳಗೊಂಡ ಸಂಘಗಳಿಗೆ ಪ್ರೋತ್ಸಾಹಿಸಲು ಕರ್ನಾಟಕ ವಿದ್ಯುಚ್ಛಕ್ತಿ ಕಾಯ್ದೆ 2003ರ ಪ್ರಕಾರ, ಕ್ಯಾಪ್ಟೀವ್ ಜನರೇಟಿಂಗ್ ಪ್ಲಾಂಟ್‌ಗಳನ್ನು ಸ್ಥಾಪನೆ ಮಾಡಿಕೊಳ್ಳಲು ಅವಕಾಶವನ್ನು ಕಲ್ಪಿಸಲಾಗಿದೆ.

ಈ) ಮತ್ತು ಉ) ಇಂತಹ ಯಾವುದೇ ಸಹಕಾರ ಸಂಘಗಳಿಂದ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ.

1468(1766) ಶ್ರೀ ಪದ್ಮನಾಭ ಕೊಟ್ಟಾರಿ.ಕೆ(ವಿಟ್ಲ) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆಯವರು ಹಮ್ಮಿಕೊಂಡು ಕಾರ್ಯಗತಗೊಳಿಸುತ್ತಿರುವ ಯೋಜನೆಗಳು ಯಾವುವು;